# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 713 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 17.09.2021 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸಮುದಾಯದವರಿಗೆ ನೀಡುತ್ತಿರುವ ಸೇವೆಗಳು ಮತ್ತು ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸಮುದಾಯದವರಿಗೆ ನೀಡುತ್ತಿರುವ ಸೇವೆಗಳು ಮತ್ತು ಯೋಜನೆಗಳ ಮಾಹಿತಿಯನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ.<br>**ಡಿ. ದೇವರಾಜ ಅರಸು, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ.**<br>ಡಿ. ದೇವರಾಜ ಅರಸು, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ.<br>➢ ಚೈತನ್ಯ ಸಹಾಯಧನ ಯೋಜನೆ.<br>➢ ಡಿ. ದೇವರಾಜ ಅರಸು ಸ್ವಯಂ ಉದ್ಯೋಗ ಸಾಲ ಯೋಜನೆ.<br>➢ ಕಿರುಸಾಲ ಯೋಜನೆ.<br>➢ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಬಡ್ಡಿ ರಹಿತ ಸಾಲ.<br>➢ ಸಾಂಪ್ರದಾಯಿಕ ವೃತ್ತಿದಾರರ ಮತ್ತು ಕುಶಲ ಕರ್ಮಿಗಳಿಗೆ ಆರ್ಥಿಕ ನೆರವು.<br>➢ ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>**ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮ.**<br>ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>➢ ಸ್ವಯಂ ಉದ್ಯೋಗ ಸಾಲ ಯೋಜನೆ<br>➢ ಸ್ವ-ಸಹಾಯ ಗುಂಪುಗಳ ಸಾಲ ಮತ್ತು ಉದ್ಯೋಗ ಸಾಲ ಯೋಜನೆ.<br>➢ ಬ್ಯಾಂಕ್ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ.<br>➢ ಅರಿವು ಶೈಕ್ಷಣಿಕ ಸಾಲ ಯೋಜನೆ.<br>➢ ಭೂ ಖರೀದಿ ಯೋಜನೆ.<br>➢ ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>**ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ**<br>ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>➢ ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ.<br>➢ ಸ್ವಯಂ ಉದ್ಯೋಗ ಸಾಲ ಯೋಜನೆ. |

**ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃ... ನಿಗಮ.**

ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- ಸಾಂಪ್ರದಾಯಿಕ ಕುಶಲಕರ್ಮಿಗಳ ಸಾಲ ಯೋಜನೆ.
- ಸ್ವಯಂ ಉದ್ಯೋಗ ಸಾಲ ಯೋಜನೆ.
- ಗಂಗಾ ಕಲ್ಯಾಣ ನೀರಾವರಿ ಯೋಜನೆ.
- ಸ್ವ ಸಹಾಯ ಗುಂಪುಗಳ ಮೂಲಕ ಸಾಲ ಮತ್ತು ಸಹಾಯಧನ ಯೋಜನೆ.
- ಅರಿವು ಶೈಕ್ಷಣಿಕ ಸಾಲ ಯೋಜನೆ.

**ಕರ್ನಾಟಕ ಆರ್ಯವೈಶ್ಯ ಸಮುದಾಯಗಳ ಅಭಿವೃದ್ಧಿ ನಿಗಮ.**

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮವನ್ನು 2013 ರ ಕಂಪನಿ ಕಾಯ್ದೆ ಅನ್ವಯ ದಿನಾಂಕ:13.06.2019 ರಂದು ನೋಂದಣಿ ಮಾಡಿಸುವ ಮೂಲಕ ಸ್ಥಾಪನೆ ಮಾಡಲಾಗಿದ್ದು, ನಿಗಮದ ವತಿಯಿಂದ ಎರಡು ಯೋಜನೆಗಳಾದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ ಹಾಗೂ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ.**

ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮವನ್ನು 2013 ರ ಕಂಪನಿ ಕಾಯ್ದೆ ಅನ್ವಯ ದಿ:31.04.2017ರಂದು ನೋಂದಣಿ ಮಾಡಿಸುವ ಮೂಲಕ ಸ್ಥಾಪನೆ ಮಾಡಲಾಗಿರುತ್ತದೆ. ನಿಗಮದ ವತಿಯಿಂದ 03 ಯೋಜನೆಗಳಾದ 1) ಅರಿವು ಶೈಕ್ಷಣಿಕ ಸಾಲ ಯೋಜನೆ. 2) ಸ್ವಯಂ ಉದ್ಯೋಗ ನೇರ ಸಾಲ ಯೋಜನೆ ಮತ್ತು 3) ಗಂಗಾ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ.**

ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು.
- ಸ್ವಯಂ ಉದ್ಯೋಗ ನೇರಸಾಲ ಯೋಜನೆ.
- ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ.
- ಅರಿವು-ಶೈಕ್ಷಣಿಕ ಸಾಲ ಯೋಜನೆ.
- ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆ.
- ಮಹಿಳೆಯರಿಗೆ ಕಿರುಸಾಲ (ಮೈಕ್ರೋಕ್ರೆಡಿಟ್) ಯೋಜನೆ.

| | | |
|---|---|---|
| | | **ನಿಜ ಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ.**<br>ನಿಜ ಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>➢ ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ (ಚೈತನ್ಯ ಸಬ್ಸಿಡಿ-ಕಂ-ಸಾಫ್ಟ್ ಲೋನ್ ಯೋಜನೆ).<br>➢ ಸ್ವಯಂ ಉದ್ಯೋಗ ಸಾಲ ಮತ್ತು ಸಹಾಯಧನ ಯೋಜನೆ.<br>➢ ಕಿರುಸಾಲ/ಸ್ವಸಹಾಯ ಗುಂಪುಗಳಿಗೆ ಸಾಲ ಮತ್ತು ಸಹಾಯ ಧನ ಯೋಜನೆ.<br>➢ ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>➢ ಅರಿವು-ಶೈಕ್ಷಣಿಕ ಸಾಲ ಯೋಜನೆ.<br>➢ ಕೌಶಲ್ಯಾಭಿವೃದ್ಧಿ/ಉದ್ಯಮಶೀಲತಾ ತರಬೇತಿ ಯೋಜನೆ. |
| ಈ) | ಕಳೆದ 3 ವರ್ಷಗಳಲ್ಲಿ ಮತ್ತು ಪ್ರಸ್ತುತ ವರ್ಷದಲ್ಲಿ ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ಮತ್ತು NEET ಹಾಗೂ JEE ಪರೀಕ್ಷೆ ಪೂರ್ವ ತರಬೇತಿ ಯೋಜನೆಗಳ ಅಡಿಯಲ್ಲಿ ನಿಗಡಿಪಡಿಸಿದ ಅನುದಾನವೆಷ್ಟು; (ಗುರಿ ಹಾಗೂ ಸಾಧನೆಗಳ ವಿವರ ನೀಡುವುದು) | ಕಳೆದ 3 ವರ್ಷಗಳಲ್ಲಿ ಮತ್ತು ಪ್ರಸ್ತುತ ವರ್ಷದಲ್ಲಿ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ಮತ್ತು NEET ಹಾಗೂ JEE ಪರೀಕ್ಷೆ ಪೂರ್ವ ತರಬೇತಿ ಯೋಜನೆಗಳ ಅಡಿಯಲ್ಲಿ ನಿಗಡಿಪಡಿಸಿದ ಮತ್ತು ಗುರಿ ಹಾಗೂ ಸಾಧನೆಗಳ ವಿವರವನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ.<br>**ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ**<br>ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದ ವತಿಯಿಂದ ಒಬ್ಬ ವಿದ್ಯಾರ್ಥಿಗೆ ವಿದೇಶಿ ವ್ಯಾಸಂಗಕ್ಕಾಗಿ ರೂ. 10.00 ಲಕ್ಷಗಳ ಸಾಲವನ್ನು ಮಂಜೂರು ಮಾಡಲಾಗಿದೆ. |
| ಉ) | ಕಳೆದ 3 ವರ್ಷಗಳಲ್ಲಿ ಮತ್ತು ಪ್ರಸ್ತುತ ವರ್ಷದಲ್ಲಿ ಈ ಎರಡು ಯೋಜನೆಗಳಿಗೆ ಸರ್ಕಾರ ಅನುದಾನ ಮತ್ತು ವಿದ್ಯಾರ್ಥಿಗಳಿಗೆ ನೀಡುವ ಮೊತ್ತವನ್ನು ಕಡಿಮೆಗೊಳಿಸುವುದು ನಿಜವೇ; ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು? | 1) NEET ಹಾಗೂ JEE ಪರೀಕ್ಷಾ ಪೂರ್ವ ತರಬೇತಿಯನ್ನು 2019-20ನೇ ಸಾಲಿನಿಂದ ಇಲಾಖೆಯು ಅನುಷ್ಠಾನಗೊಳಿಸುತ್ತಿದ್ದು, ಸದರಿ ಕಾರ್ಯಕ್ರಮದ ಅನುಷ್ಠಾನಕ್ಕೆ ಅನುದಾನದ ಕೊರತೆ ಇರುವುದಿಲ್ಲ.<br>2) ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ ಕಾರ್ಯಕ್ರಮವನ್ನು 2018-19 ಮತ್ತು 2019-20ನೇ ಸಾಲಿನಲ್ಲಿ ಅನುಷ್ಠಾನ ಮಾಡಲಾಗಿರುತ್ತದೆ. ಆದರೆ 2020-21 ಮತ್ತು 2021-22 ನೇ ಸಾಲಿನಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಅನುದಾನದ ಕೊರತೆ ಇರುವುದರಿಂದ ಸದರಿ ಕಾರ್ಯಕ್ರಮಕ್ಕೆ ಅರ್ಜಿಗಳನ್ನು ಆಹ್ವಾನಿಸಿರುವುದಿಲ್ಲ. |

ಸಂಖ್ಯೆ:ಹಿಂವಕ 524 ಬಿಎಂಎಸ್ 2021

(ಕೋಟ ಶ್ರೀನಿವಾಸ ಪೂಜಾರಿ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

# ಅನುಬಂಧ-1

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಕೆ.ಎ.ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:713 ಕ್ಕೆ ಉತ್ತರ**

**ಕಾರ್ಯಕ್ರಮಗಳವಿವರ**

| | |
|---|---|
| **I** | **ವಿದ್ಯಾರ್ಥಿ ವೇತನ ಕಾರ್ಯಕ್ರಮಗಳು:** |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ. |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ. |
| 3 | ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ. |
| 4 | ಶುಲ್ಕ ಮರು ಪಾವತಿ. |
| 5 | ಪೂರ್ಣಾವಧಿ ಪಿಎಚ್.ಡಿ ಮಾಡುವ ವಿದ್ಯಾರ್ಥಿಗಳಿಗೆ ಫೆಲೋಶಿಫ್. |
| 6 | ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ. |
| 7 | ದೇವರಾಜ ಅರಸು ಪ್ರತಿಭಾ ಪುರಸ್ಕಾರ. |
| 8 | ನಿಲಯಾರ್ಥಿಗಳಿಗೆ ಪ್ರೋತ್ಸಾಹ ಧನ. |
| 9 | ಐ.ಐ.ಟಿ, ಐ.ಐ.ಎಂ, ಐ.ಐ.ಎಸ್ಸಿ ಇತ್ಯಾದಿಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ. |
| | |
| **II** | **ತರಬೇತಿ ಕಾರ್ಯಕ್ರಮಗಳು:** |
| 1 | ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ. |
| 2 | ನರ್ಸಿಂಗ್ ತರಬೇತಿ. |
| 3 | ಕಾನೂನು ಪದವೀಧರರಿಗೆ ಶಿಷ್ಯವೇತನ. |
| 4 | ಸೇನೆಗಳಿಗೆ ಆಯ್ಕೆಯಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ. |
| 5 | ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ವೃತ್ತಿಮಾರ್ಗದರ್ಶನ ಹಾಗೂ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ. |
| | |
| **III** | **ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ ಅಭಿವೃದ್ಧಿ ಕಾರ್ಯಕ್ರಮಗಳು.** |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ. |
| 2 | ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿ ವೇತನ. |
| 3 | ಆಶ್ರಮ ಶಾಲೆಗಳ ನಿರ್ವಹಣೆ. |
| 4 | ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ . |
| 5 | ಅರಿವು ಮೂಡಿಸುವ ಕಾರ್ಯಕ್ರಮ. |
| 6 | ಮೂಲಭೂತ ಸೌಕರ್ಯಗಳು. |

| | |
|---|---|
| 7 | ವಸತಿಸೌಲಭ್ಯ. |
| 8 | ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ. |
| 9 | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಮೂಲಕ ಅನುಷ್ಠಾನ ಮಾಡಲಾಗುತ್ತಿರುವ ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳು. |
| 10 | ವಿವಿಧ ಸಮುದಾಯಗಳ ಅಭಿವೃದ್ಧಿ. |
| 11 | ಹಿಂದುಳಿದ ವರ್ಗಗಳ ಸಮುದಾಯಗಳು ನಿರ್ಮಿಸುವ ಸಮುದಾಯ ಭವನಗಳಿಗೆ ಸಹಾಯಾನುಧಾನ. |
| 12 | ಹಿಂದುಳಿದ ವರ್ಗಗಳ ಸಂಘ-ಸಂಸ್ಥೆಗಳು ನಡೆಸುವ ಖಾಸಗಿ ವಿದ್ಯಾರ್ಥಿ ನಿಲಯಗಳಿಗೆ ಒಂದು ಬಾರಿಯ ಅನುದಾನ. |
| 13 | ದೇವರಾಜ ಅರಸು ಭವನ ನಿರ್ಮಾಣ. |

<u>ಅನುಬಂಧ-2</u>

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:713ಕ್ಕೆ ಉತ್ತರ

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಕಾರ್ಯಕ್ರಮಗಳು | ವರ್ಷ | ನಿಗದಿ ಪಡಿಸಿದ ಅನುದಾನ | ವಿನಿಯೋಗಿಸಿದ ಅನುದಾನ | ಭೌತಿಕ ಗುರಿ | ಭೌತಿಕ ಸಾಧನೆ |
|---|---|---|---|---|---|---|
| 1 | ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ | 2018-19 | 431.62 | 431.62 | ಹೊಸ ವಿದ್ಯಾರ್ಥಿಗಳು 48 | ಹೊಸ ವಿದ್ಯಾರ್ಥಿಗಳು 48 |
| | | 2019-20 | 925.40 | 925.40 | 46 ನವೀಕರಣ & 65 ಹೊಸ ವಿದ್ಯಾರ್ಥಿಗಳು ಸೇರಿಸಿ ಒಟ್ಟು 111 ವಿದ್ಯಾರ್ಥಿಗಳು | 46 ನವೀಕರಣ & 65 ಹೊಸ ವಿದ್ಯಾರ್ಥಿಗಳು ಸೇರಿಸಿ ಒಟ್ಟು 111 ವಿದ್ಯಾರ್ಥಿಗಳು |
| | | 2020-21 | 499.00 | 499.00 | 57 ನವೀಕರಣ ವಿದ್ಯಾರ್ಥಿಗಳು | 57 ನವೀಕರಣ ವಿದ್ಯಾರ್ಥಿಗಳು |
| | | 2021-22 | 132.62 | 96.70 | 12 ನವೀಕರಣ ವಿದ್ಯಾರ್ಥಿಗಳು | 12 ನವೀಕರಣ ವಿದ್ಯಾರ್ಥಿಗಳು |
| 2 | NEET ಹಾಗೂ JEE ಪರೀಕ್ಷಾ ಪೂರ್ವ ತರಬೇತಿ | 2018-19 | - | - | - | - |
| | | 2019-20 | 78.00 | 78.00 | 104 | 104 |
| | | 2020-21 | 59.63 | 59.63 | 318 | 318 |
| | | 2021-22 | - | - | - | - |